ಸಿಸಿ ನಂ. 194/2022 ಪಿಡಬ್ಲೂ :1

ದಿನಾಂಕಃ 14-09-2023 ರಂದು ಸಾಕ್ಷಿಯನ್ನು ಪುನಃ ಕರೆಸಿ ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆಃ ಪಿರ್ಯಾದುದಾರರ ಪರವಾಗಿಃ ಶ್ರೀ ಆರ್ ಜಿ ಎನ್ ವಕೀಲರಿಂದಃ**

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತದೆ.

2. ಫಿರ್ಯಾದುದಾರ ಸಂಸ್ಥೆಯವರು ನನಗೆ ನೀಡಿದ ಅಧಿಕಾರ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಆರೋಪಿಯು ನೀಡಿದ ಚೆಕ್ ಹಾಜರು ಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿರುವ ಸಹಿ ಆರೋಪಿಯ ಸಹಿಯಾಗಿರುತ್ತದೆ . ಸದರಿ ಸಹಿಯನ್ನು ನಿಪಿ-2 ಎ ಎಂದು ಗುರುತಿಸಲಾಯಿತು. ಬ್ಯಾಂಕನವರು ಕೊಟ್ಟಿರುವ ಮೆಮೊವನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ನಾವು ನಮ್ಮ ವಕೀಲರ ಮುಖಾಂತರ ಆರೋಪಿಗೆ ನೀಡಿದ ನೋಟಿಸಿನ ಕಚೇರಿ ಪ್ರತಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ರಸೀದಿಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು. ಆರೋಪಿಗೆ ಕಳುಹಿಸಿರುವ ನೋಟಿಸನ್ನು ಅವರು ಸ್ವೀಕರಿಸದ ಕಾರಣ ವಾಪಸ್ಸು ಬಂದಿದ್ದು ಅದನ್ನು ಅಂಚೆ ಲಕೋಟೆ ಸಮೇತವಾಗಿ ಹಾಜರು ಪಡಿಸಿರುತ್ತೇವೆ . ಸದರಿ ಅಂಚೆ ಲಕೋಟೆಯನ್ನು ನಿಪಿ-6 ಎಂದು, ಅದರ ಒಳಗಿದ್ದ ನೋಟಿಸನ್ನು ನಿಪಿ-7 ಎಂದು ಗುರುತಿಸಲಾಯಿತು. ಆರೋಪಿಯು ಕೊಟ್ಟಿರುವ ಸಾಲದ ಅರ್ಜಿಯ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು . ವೈಯಕ್ತಿಕ ಸಾಲದ ಕರಾರು ಪತ್ರದ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-9 ಎಂದು ಗುರುತಿಸಲಾಯಿತು . ಡಿಮಾಂಡ್

ಪ್ರಾಮಿಸರಿ ನೋಟಿನ ಯಥಾ ನಕಲನ್ನು ಹಾಜರು ಪಡಿಸಿದ್ದು ಅದನ್ನು ನಿಪಿ-10 ಎಂದು ಗುರುತಿಸಲಾಯಿತು . ಜಾಮೀನುದಾರರು ಬರೆದುಕೊಟ್ಟಿರುವ ಭದ್ರತಾ ಪತ್ರದ ಯಥಾ ನಕಲನ್ನು ಹಾಜರು ಪಡಿಸಿದ್ದು ನಿಪಿ-11 ಎಂದು ಗುರುತಿಸಲಾಯಿತು . ಆರೋಪಿಗೆ ಸಾಲ ಕೊಟ್ಟಿರುವ ಬಗ್ಗೆ ಅವರು ಕೊಟ್ಟಿರುವ ರಸೀದಿಯ ಯಥಾ ನಕಲನ್ನು ಹಾಜರು ಪಡಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು .

( ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಧಾನ ಪ್ರ.ದ.ನ್ಯಾದಂ., ಕುಮಟಾ.